ಕರ್ನಾಟಕ ವಿಧಾನ ಪರಿಷತ್ತು

1	ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	652
2	ಸದಸ್ಯರ ಹೆಸರು	:	ಶ್ರೀ ಲಹರ್ ಸಿಂಗ್ ಸಿರೋಯಾ
3	ಉತ್ತರಿಸುವ ದಿನಾಂಕ	:	12-03-2020
4	ಉತ್ತರಿಸುವವರು	:	ಮುಖ್ಯಮಂತ್ರಿಗಳು

ಕ್ರ.ಸಂ	ಪ್ರಶ್ನೆ	ಉತ್ತರ
ಅ)	ಬೆಂಗಳೂರು ನಗರದಲ್ಲಿರುವ ಬೀದಿ ನಾಯಿ ಕಡಿತದ ಪ್ರಕರಣಗಳು ಹೆಚ್ಚಾಗುತ್ತಿದ್ದು, ಸರ್ಕಾರಿ ಆಸ್ಪತ್ರೆಗಳಲ್ಲಿ ರೇಬಿಸ್ ಲಸಿಕೆಯ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಪಾಲಿಕೆಯ ಎಲ್ಲಾ ರೆಫರಲ್ ಹೆರಿಗೆ ಆಸ್ಪತ್ರೆ ಮತ್ತು ಆರೋಗ್ಯ ಕೇಂದ್ರಗಳಲ್ಲಿ ರೇಬೀಸ್ ಲಸಿಕೆಗಳು ಲಭ್ಯವಿದ್ದು, ಯಾವುದೇ ಕೊರತೆ ಇರುವುದಿಲ್ಲ.
ಆ)	ನಿಗದಿತ ಪ್ರಮಾಣದಲ್ಲಿ ರೇಬೀಸ್ ಲಸಿಕೆಯನ್ನು ಆಸ್ಪತ್ರೆಗಳಿಗೆ ಸರಬರಾಜು ಮಾಡಲು ಸರ್ಕಾರವು ತೆಗೆದುಕೊಂಡ ಕ್ರಮಗಳೇನು;	ನಿಗದಿತ ಪ್ರಮಾಣದಲ್ಲಿ ರೇಬೀಸ್ ಲಸಿಕೆಯನ್ನು ಆಸ್ಪತ್ರೆಗಳಿಗೆ ಇ-ಪ್ರಕ್ಯೂರ್‌ಮೆಂಟ್ ಮುಖಾಂತರ ಸರಬರಾಜು ಮಾಡಲಾಗುತ್ತಿದೆ.
ಇ)	ಕಳೆದ 03 ವರ್ಷಗಳಲ್ಲಿ ಬೆಂಗಳೂರು ನಗರದಲ್ಲಿ ದಾಖಲಾಗಿರುವ ಬೀದಿನಾಯಿ ಕಡಿತದ ಪ್ರಕರಣಗಳೆಷ್ಟು;	ಕಳೆದ 03 ವರ್ಷಗಳಲ್ಲಿ ಬೆಂಗಳೂರು ನಗರದಲ್ಲಿ ಬೀದಿನಾಯಿ ಕಡಿತದ ಪ್ರಮಾಣ ಈ ಕೆಳಕಂಡಂತಿದೆ. **2017 ರಲ್ಲಿ –12291** **2018 ರಲ್ಲಿ –3832** **2019 ರಲ್ಲಿ –8799** **2020 ರಲ್ಲಿ –768 (ಈ ತಹಲ್‌ವರಗೂ)**
ಈ)	ಬೀದಿನಾಯಿಗಳ ಜನನ ಪ್ರಮಾಣ ನಿಯಂತ್ರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?	ಬೀದಿನಾಯಿಗಳ ಜನನ ಪ್ರಮಾಣ ನಿಯಂತ್ರಿಸಲು ಎನ್.ಜಿ.ಓ ಸಂಸ್ಥೆಗಳಿಂದ ಹಾಗೂ ಸೇವಾದಾರರಿಂದ ಸಂತಾನಹರಣ ಶಸ್ತ್ರಚಿಕಿತ್ಸೆ (ABC) ನಡೆಸಲು ಕಾರ್ಯಕ್ರಮವನ್ನು ರೂಪಿಸಲಾಗಿರುತ್ತದೆ ಹಾಗೂ ಎಲ್ಲಾ ವಲಯಗಳಲ್ಲಿ ಸದರಿ ಕಾರ್ಯಕ್ರಮವನ್ನು ಅನುಷ್ಠಾನಗೊಳ್ಳಲು ಕ್ರಮ ವಹಿಸಲಾಗಿರುತ್ತದೆ.

ಸಂಖ್ಯೆ: ನಅಇ 43 ಎಂಎನ್‌ವೈ 2020

ಬಿ.ಎಸ್. ಯಡಿಯೂರಪ್ಪ

(ಬಿ.ಎಸ್.ಯಡಿಯೂರಪ್ಪ)

ಮುಖ್ಯಮಂತ್ರಿ